## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 932 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 11.04.2018

## ಸುತ್ತೋಲೆ

ವಿಷಯ: ಗಾಂಧಿ ಗ್ರಾಮ ಪುರಸ್ಕಾರ ಪ್ರೋತ್ಸಾಹ ಧನವನ್ನು ವಿನಿಯೋಗಿಸಲು ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 450 ಗ್ರಾಪಂಅ 2016(ಭಾಗ-2), ದಿನಾಂಕ 01.10.2016

2) ಸರ್ಕಾರದ ಸಮಸಂಖ್ಯೆಯ ಸುತ್ತೋಲೆ, ದಿನಾಂಕ 05.01.2018

***

ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯಲ್ಲಿ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನರಾದ ಗ್ರಾಮ ಪಂಚಾಯತಿಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಲಾಗುವ ರೂ.5.00 ಲಕ್ಷಗಳ ಪ್ರೋತ್ಸಾಹ ಧನವನ್ನು ವಿನಿಯೋಗಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಸದರಿ ಮಾರ್ಗಸೂಚಿಗಳ ಜೊತೆಗೆ ಕೆಳಗೆ ತಿಳಿಸಲಾಗಿರುವ ಉದ್ದೇಶಕ್ಕೂ ಸದರಿ ಪ್ರೋತ್ಸಾಹ ಧನವನ್ನು ವಿನಿಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

1) ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಣಿಜ್ಯ ಮಳಿಗೆ ನಿರ್ಮಾಣ.

ಪುರಸ್ಕಾರಕ್ಕೆ ಆಯ್ಕೆಗೊಂಡ ಗ್ರಾಮ ಪಂಚಾಯತಿಗಳು ಪ್ರೋತ್ಸಾಹ ಧನದ ಮೊತ್ತಕ್ಕೆ ನಿಗಧಿಪಡಿಸಿದ ಮಾರ್ಗಸೂಚಿಗಳನ್ವಯ ತಯಾರಿಸಿದ ಕ್ರಿಯಾಯೋಜನೆಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ನಿಯಮಾನುಸಾರ ವೆಚ್ಚ ಮಾಡಲು ಸೂಚಿಸಿದೆ.

11/4/18

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ನಿರ್ದೇಶಕರು(ಪಂ.ರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
4. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯ ಮುಖಾಂತರ).
6. ಕರ್ನಾಟಕ ವಿಕಾಸ ಮಾಸಪತ್ರಿಕೆಯಲ್ಲಿ ಪ್ರಕಟಿಸಲು.
7. ಗಣಕ ಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.

**ಪ್ರತಿಯನ್ನು ಮಾಹಿತಿಗಾಗಿ :**

1. ಸನ್ಮಾನ್ಯ ಗ್ರಾ.ಅ. & ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.